ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ಮಹಾನಗರ ಪಾಲಿಕೆಗಳ ತ್ಯಾಜ್ಯ ಸಂಸ್ಕರಣೆ ಕುರಿತು

ಶ್ರೀ ಎಸ್. ಎಲ್. ಭೋಜೇಗೌಡ(ಶಿಕ್ಷಕರ ಕ್ಷೇತ್ರ):-

485 (576) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸ್ಥಳೀಯ ಸಂಸ್ಥೆಗಳಲ್ಲಿ ತ್ಯಾಜ್ಯ ಸಂಸ್ಕರಣೆ ನಿಯಮ ಪಾಲನೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಪ್ರತಿನಿತ್ಯ ಎಷ್ಟು ಘನತ್ಯಾಜ್ಯ ಸಂಗ್ರಹವಾಗುತ್ತಿದೆ ಹಾಗೂ ಅದನ್ನು ವೈಜ್ಞಾನಿಕ ರೀತಿಯಲ್ಲಿ ಪುನರ್ ಬಳಕೆ ಮಾಡುವ ಮತ್ತು ವಿಲೇವಾರಿ ಮಾಡುವ ಯೋಜನೆಯ ವಿವರ ನೀಡುವುದು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ರೀತಿ ಸಂಗ್ರಹವಾದ ತ್ಯಾಜ್ಯವನ್ನು ಭೂಮಿಗೆ ಹಾಕಬಾರದೆಂದು 2005ರಲ್ಲಿ ನಿಯಮ ರೂಪಿಸಿದ್ದರೂ ಇದನ್ನು ಲೆಕ್ಕಿಸದೆ ಕಸವನ್ನು ಗುಂಡಿಗೆ ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ನಿಲ್ಲಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?